ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/04/ಇಸಿಎಸ್(1)/2024

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-560001
ದೂರವಾಣಿ ಸಂಖ್ಯೆ: 080-22200777
ದಿನಾಂಕ:10.07.2025

**ಸುತ್ತೋಲೆ**

ವಿಷಯ: ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾ ಕಾರ್ಯ ನಿರ್ವಹಿಸುವ ಬಾಹ್ಯ ಉಪನ್ಯಾಸಕರುಗಳಿಗೆ ಹಾಜರಾತಿ ಪತ್ರ ನೀಡುವ ಕುರಿತು.

************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಗಳಲ್ಲಿ ಪರೀಕ್ಷಾ ಮುಖ್ಯ ಅಧೀಕ್ಷಕರು, ಉಪ ಮುಖ್ಯ ಅಧೀಕ್ಷಕರು, ಮುಖ್ಯ ವೀಕ್ಷಕರು, ಆಂತರಿಕ ಅಂಕಗಳ ಪರಿವೀಕ್ಷಕರು, ಪ್ರಾಯೋಗಿಕ ಪರೀಕ್ಷೆಯ ಬಾಹ್ಯ ಪರೀಕ್ಷಕರು ಮುಂತಾದ ಪರೀಕ್ಷಾ ಕಾರ್ಯ ನಿರ್ವಹಿಸುವ ಉಪನ್ಯಾಸಕರುಗಳಿಗೆ ಸಂಬಂಧಿಸಿದ ಪರೀಕ್ಷಾ ಕೇಂದ್ರ/ಸಂಸ್ಥೆಗಳ ಪ್ರಾಂಶುಪಾಲರು, ಪರೀಕ್ಷಾ ಅವಧಿಯ ದಿನಗಳಿಗೆ ಮಾತ್ರ "ಹಾಜರಾತಿ ಪ್ರಮಾಣ ಪತ್ರ" ವನ್ನು ನೀಡುವಂತೆ ಸೂಚಿಸಲಾಗಿದೆ.

ಥಿಯರಿ ಪರೀಕ್ಷಾ ವೇಳಾಪಟ್ಟಿಯನ್ವಯ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆದ ದಿನಾಂಕಗಳನ್ನು/ ಪ್ರಾಯೋಗಿ ಪರೀಕ್ಷೆಗಳು ನಡೆದ ಬಗ್ಗೆ Conduction Certificate ಗಳನ್ನು ಹಾಜರಾತಿ ಪ್ರಮಾಣ ಪತ್ರದಲ್ಲಿ ಉಲ್ಲೇಖಿಸಲು ಸೂಚಿಸಲಾಗಿದೆ. ಪರೀಕ್ಷಾ ಅವಧಿಯನ್ನು ಹೊರತು ಪಡಿಸಿ ಹಾಜರಾತಿ ಪತ್ರ ನೀಡಿದ್ದಲ್ಲಿ ಸಂಬಂಧಿಸಿದ ಪ್ರಿನ್ಸಿಪಾಲರ ಮೇಲೆ ಸೂಕ್ತ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ತಿಳಿಸಲಾಗಿದೆ.

**ಮುಂದುವರೆದು, ಪರೀಕ್ಷಾ ಕೆಲಸಗಳಿಗೆ ನಿಯುಕ್ತಿಗೊಂಡಿರುವ ಎಲ್ಲಾ ಸ್ತರದ ಅಧಿಕಾರಿ/ಸಿಬ್ಬಂದಿಯವರು ಬೆಳಗಿನ ಅಧಿವೇಶನದ ಪರೀಕ್ಷೆಯು ಪ್ರಾರಂಭವಾಗುವ ಮುನ್ನ AEBAS ಮುಖಾಂತರ ಹಾಜರಾತಿ ನಮೂದಿಸುವುದು ಹಾಗೂ ಮಧ್ಯಾಹ್ನದ ಅಧಿವೇಶನದ ಪರೀಕ್ಷೆಗಳು ಮುಕ್ತಾಯವಾಗಿ ಸಂಬಂಧಪಟ್ಟ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು/ಮುಖ್ಯ ವೀಕ್ಷಕರುಗಳ ಅನುಮತಿ ಪಡೆದು AEBAS ಮುಖಾಂತರ ಹಾಜರಾತಿ ನಮೂದಿಸುವುದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಲಾಗಿದೆ.**

ಹಾಜರಾತಿ ಪ್ರಮಾಣ ಪತ್ರವನ್ನು ಪಡೆದಂತಹ ಉಪನ್ಯಾಸಕರುಗಳು ಕೂಡಲೇ ತಮ್ಮ ತಮ್ಮ ಸಂಸ್ಥೆಗಳಲ್ಲಿ ಕಾರ್ಯವರದಿ ಮಾಡಿಕೊಳ್ಳಲು ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದಲ್ಲಿನ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು- ಅಗತ್ಯ ಕ್ರಮಕ್ಕಾಗಿ.

ಪ್ರತಿ,
1) ನಿರ್ದೇಶಕರ ಆಪ್ತಶಾಖೆ
2) ಕಾರ್ಯದರ್ಶಿಯವರ ಆಪ್ತ ಶಾಖೆ
3) ಇ – ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್ ನಲ್ಲಿ ಪ್ರಕಟಿಸಲು
4) ಗಣಕ ಕೇಂದ್ರಕ್ಕೆ – ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು